ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

DTE-ADMIO/EST 9/09/2022

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001
ದಿನಾಂಕ: 29-09-2022

## ಸುತ್ತೋಲೆ

ವಿಷಯ: ಬಯೋಮೆಟ್ರಿಕ್ ಯಂತ್ರದಲ್ಲಿ ಕಡ್ಡಾಯವಾಗಿ ಹಾಜರಾತಿಯನ್ನು ದಾಖಲಿಸುವಂತೆ ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂ: ಸಿಆಸುಇ (ಆಸು)/26/ಕತವ 2022 ದಿ; 18-02-2022
2. ಆಯುಕ್ತರ ಕಛೇರಿ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಸುತ್ತೋಲೆ ಸಂಖೆ: DTE-ADMIO/EST 9/13/2022 ದಿನಾಂಕ; 19-08-2022

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್/ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಅಧಿಕಾರಿ/ಸಿಬ್ಬಂದಿ ವರ್ಗದವರಿಗೆ ಬಯೋಮೆಟ್ರಿಕ್ ಹಾಜರಾತಿ ಕಡ್ಡಾಯಗೊಳಿಸಿ ಈ ಕೆಳಕಂಡ ಸೂಚನೆಗಳನ್ನು ಪಾಲಿಸುವಂತೆ ತಿಳಿಸಲಾಗಿದೆ.

1. ಬಯೋಮೆಟ್ರಿಕ್ ಯಂತ್ರವು ಕಾರ್ಯನಿರ್ವಹಿಸದಿದ್ದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರ ಹಂತದಲ್ಲಿಯೇ ಸರಿಪಡಿಸತಕ್ಕದ್ದು.
2. ಪ್ರತಿ ದಿನ ಬಯೋಮೆಟ್ರಿಕ್ ಯಂತ್ರದಲ್ಲಿ ದಾಖಲಾಗುವ ಹಾಜರಾತಿಯ ಮಾಹಿತಿಯನ್ನು ಸಂಸ್ಥೆಯ ಜಾಲತಾಣದಲ್ಲಿ ಸದರಿ ದಿನದಂದೇ ದಿನಾಂತ್ಯಕ್ಕೆ ಪ್ರಚುರಪಡಿಸುವುದು.
3. ಎಲ್ಲಾ ಬೋಧಕ/ಬೋಧಕೇತರ ಸಿಬ್ಬಂದಿಗಳ ಬಯೋಮೆಟ್ರಿಕ್ ಯಂತ್ರದಲ್ಲಿ ದಾಖಲಾಗುವ ಹಾಜರಾತಿಯ ಮಾಹಿತಿಯನ್ನಾಧರಿಸಿ ವೇತನವನ್ನು ಪಾವತಿಸುವ ಬಗ್ಗೆ ಕ್ರಮವಹಿಸತಕ್ಕದ್ದು. ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ಪ್ರಾಂಶುಪಾಲರನ್ನು ನೇರ ಹೊಣೆಗಾರರನ್ನಾಗಿಸಲಾಗುವುದು.
4. ಪ್ರತಿ ಮಾಹೆಯ ಒಂದನೇ ತಾರೀಖಿನಂದು ಬಯೋಮೆಟ್ರಿಕ್ ಯಂತ್ರದಲ್ಲಿ ನಮೂದಿಸಲಾಗಿರುವ ಹಿಂದಿನ ಮಾಹೆಯ ಹಾಜರಾತಿಯನ್ನು ಆಯುಕ್ತಾಲಯಕ್ಕೆ ಸಲ್ಲಿಸುವುದು.

ಹಾಜರಾತಿಯನ್ನು ಆಯುಕ್ತಾಲಯಕ್ಕೆ ಕಳುಹಿಸುವಾಗ ಪ್ರಾಂಶುಪಾಲರು ಈ ಕೆಳಕಂಡ ದೃಢೀಕರಣವನ್ನು ಸಲ್ಲಿಸತಕ್ಕದು.

(A) ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಬೋಧಕ/ಬೋಧಕೇತರ ಸಿಬ್ಬಂದಿ ವರ್ಗದವರ ಬಯೋಮೆಟ್ರಿಕ್ ಹಾಜರಾತಿಯನ್ನು ನಿಯಮಾನುಸಾರ ಪರಿಶೀಲಿಸಿದ ನಂತರ ವೇತನ ಪಾವತಿಸಿರುವುದರ ಬಗ್ಗೆ ದೃಢೀಕರಣ .

(B) ಪ್ರತಿ ದಿನ ಬಯೋಮೆಟ್ರಿಕ್ ಯಂತ್ರವು ಸುಸ್ಥಿತಿಯಲ್ಲಿರುವ ಬಗ್ಗೆ ದೃಢೀಕರಣ

(C) ಮೇಲಿನ ಎಲ್ಲಾ ಅಂಶಗಳು ಸತ್ಯತೆಯಿಂದ ಕೂಡಿರುವುದಾಗಿ ದೃಢೀಕರಣ

"ಟಿಪ್ಪಣಿ ಮಾನ್ಯ ಆಯುಕ್ತರವರಿಂದ ಅನುಮೋದಿಸಲ್ಪಟ್ಟಿದೆ"

ಜಂಟಿ ನಿರ್ದೇಶಕರು (ಆಡಳಿತ)
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್ ಸಂಸ್ಥೆಗಳು/ಕಿರಿಯ ತಾಂತ್ರಿಕ ಶಾಲೆಗಳ ಪ್ರಾಂಶುಪಾಲರುಗಳ ಮಾಹಿತಿಗಾಗಿ
2. 'ಇ'-ಆಡಳಿತ ವಿಭಾಗ, ತಾಂತ್ರಿಕ ಶಿಕ್ಷಣ ಇಲಾಖೆ ಬೆಂಗಳೂರು-560 001 (ಇಲಾಖಾ WEBSITE ನಲ್ಲಿ ಪ್ರಚುರಪಡಿಸಲು)

ಪ್ರತಿ:

1. ಆಯುಕ್ತರವರ ಆಪ್ತ ಶಾಖೆಗೆ
2. ನಿರ್ದೇಶಕರವರ ಆಪ್ತ ಶಾಖೆಗೆ
3. ರಿಜಿಸ್ಟ್ರಾರ್ (ಆಡಳಿತ) ಮಾಹಿತಿಗಾಗಿ ಮತ್ತು ಸೂಕ್ತಕ್ರಮಕ್ಕಾಗಿ.